ಕಂದಾಯ ಇಲಾಖೆ

# ಜಿಲ್ಲಾಧಿಕಾರಿಯವರ ಕಛೇರಿ, ಹಾಸನ ಜಿಲ್ಲೆ, ಹಾಸನ.

**ವಿಷಯ:-** 2016 ನೇ ಸಾಲಿಗೆ ಜಿಲ್ಲೆಯಲ್ಲಿ ಖಾಲಿ ಇರುವ ಕಂದಾಯ ಇಲಾಖೆ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:-**
1. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೇಹಿಮ 95, ದಿನಾಂಕ: 20/6/1995.
2. ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 53 ಸೆನೆನಿ 2007, ದಿನಾಂಕ: 4/1/2008.
3. ಸರ್ಕಾರದ ಆದೇಶ ಸಂಖ್ಯೆ: ಕಂಇ 299 ಬಿಎಸ್‌ಸಿ 2006. ದಿನಾಂಕ: 3/2/2009 ಮತ್ತು 9/7/2009.
4. ಸರ್ಕಾರದ ಆದೇಶ ಸಂಖ್ಯೆ: ಕಂಇ 04 ಬಿಎಸ್‌ಸಿ 2011. ದಿನಾಂಕ: 25/2/2011.
5. ಸರ್ಕಾರದ ಆದೇಶ ಸಂಖ್ಯೆ: ಕಂಇ 33 ಡಿಎಸ್‌ಪಿ 2012. ದಿನಾಂಕ: 5/6/2012.
6. ಸರ್ಕಾರದ ಅ.ಸ. ಪತ್ರದ ಸಂಖ್ಯೆ: ಆರ್‌ಡಿ 33 ಡಿಎಸ್‌ಪಿ 2012. ದಿನಾಂಕ: 21/06/2012.
7. ಸರ್ಕಾರದ ಅ.ಸ.ಪ.ಸಂಖ್ಯೆ: 103 ಬಿಎಸ್‌ಸಿ 2016, ದಿನಾಂಕ: 22/07/2016.

************

## ಅಧಿಸೂಚನೆ ಸಂಖ್ಯೆ: ಗ್ರಾ.ಲೆ.ಸಿಬ್ಬಂದಿ-83/2016-2017. ದಿನಾಂಕ: 12/09/2016.

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಹಾಸನ ಜಿಲ್ಲಾ ಘಟಕದಲ್ಲಿ ಬರುವ ತಾಲ್ಲೂಕುಗಳಲ್ಲಿ 2014 ನೇ ಸಾಲಿನ ನೇಮಕಾತಿ ಪ್ರಕ್ರಿಯೆಯ ನಂತರ ವಯೋನಿವೃತ್ತಿ, ರಾಜೀನಾಮೆ, ಮುಂಬಡ್ತಿ, ವರ್ಗಾವಣೆ ಇನ್ನಿತರ ಕಾರಣಗಳಿಂದ ತೆರವಾಗಿರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು, ಕರ್ನಾಟಕ ಸಾಮಾನ್ಯ ಸೇವೆಗಳು (ರೆವಿನ್ಯೂ ಸಬೋರ್ಡಿನೇಟ್ ಬ್ರಾಂಚ್) (ಕೇಡರ್ ಅಂಡ್ ರೆಕ್ರ್ಯೂಟ್‌ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009 ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉಲ್ಲೇಖಿತ ಸರ್ಕಾರದ ಆದೇಶಗಳಲ್ಲಿ ಅನುಮೋದನೆ ನೀಡಿದೆ. ಅದರಂತೆ ಗ್ರಾಮಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಗಿನಂತಿವೆ :**

1. **ಹುದ್ದೆ ಹಾಗೂ ಸಂಖ್ಯೆ :** ಗ್ರಾಮಲೆಕ್ಕಿಗರು, ಒಟ್ಟು ಹುದ್ದೆಗಳು : 59
2. **ಹುದ್ದೆಗಳ ವರ್ಗೀಕರಣ :**

ರೋಸ್ಟರ್ ಬಿಂದು 324 ರಿಂದ 382 ರವರೆಗೆ.

| ಕ್ರ. ಸಂ. | ವರ್ಗೀಕರಣದ ವಿವರ | ಶೇಕಡಾ ಪ್ರಮಾಣ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|---|
| 1 | ಸಾಮಾನ್ಯ | 50% | 6 | 9 | 8 | 2 | 3 | 1 | 1 | 30 |
| 2 | ಪರಿಶಿಷ್ಟ ಜಾತಿ | 15% | 1 | 3 | 2 | 0 | 1 | 1 | 1 | 9 |
| 3 | ಪರಿಶಿಷ್ಟ ಪಂಗಡ | 3% | 1 | 1 | 0 | 0 | 0 | 0 | 0 | 2 |
| 4 | ಪ್ರವರ್ಗ-I | 4% | 0 | 1 | 1 | 0 | 0 | 1 | 0 | 3 |
| 5 | ಪ್ರವರ್ಗ-IIA | 15% | 1 | 2 | 3 | 0 | 1 | 1 | 1 | 9 |
| 6 | ಪ್ರವರ್ಗ-IIB | 4% | 0 | 1 | 0 | 0 | 0 | 1 | 0 | 2 |
| 7 | ಪ್ರವರ್ಗ-IIIA | 4% | 0 | 1 | 0 | 0 | 0 | 1 | 0 | 2 |
| 8 | ಪ್ರವರ್ಗ-IIIB | 5% | 0 | 1 | 0 | 0 | 0 | 0 | 1 | 2 |
| | ಒಟ್ಟು | | 9 | 19 | 14 | 2 | 5 | 6 | 4 | 59 |

ಪ.ತಿ.ನೋ.-

**3. ವೇತನ ಶ್ರೇಣಿ :**

11600–200–12000–250–13000–300–14200–350–15600–400–17200–450–19000–500–21000.

**4. ಶೈಕ್ಷಣಿಕ ವಿದ್ಯಾರ್ಹತೆ :**

ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಅಥವಾ CBSE ಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

**5. ಅರ್ಜಿ ಸಲ್ಲಿಸುವ ವಿಧಾನ ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: (ಅರ್ಜಿ ಸಲ್ಲಿಸುವ ವಿಧಾನವನ್ನು ಕ್ರಸಂ.15 ರಲ್ಲಿ ವಿವರಿಸಿದೆ.)**

ಅಂತರ್ಜಾಲದ ಮೂಲಕ (Online) ಅರ್ಜಿಗಳನ್ನು ದಿನಾಂಕ: **19/09/2016** ರಿಂದ ಸಲ್ಲಿಸಬಹುದಾಗಿದ್ದು, ಕೊನೆಯ ದಿನಾಂಕ: **18/10/2016** ಆಗಿರುತ್ತದೆ. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ ಪಾವತಿಸಿ ಚಲನ್‌ನ್ನು ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ: **19/10/2016** ಆಗಿರುತ್ತದೆ. ನಿಗದಿತ ದಿನಾಂಕದ (18/10/2016)ನಂತರ ಸಲ್ಲಿಸಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

**6. ನಿಗದಿತ ಅರ್ಜಿ ಶುಲ್ಕ :**

| | |
|---|---|
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಹಾಗೂ ಮಹಿಳಾ ಅಭ್ಯರ್ಥಿಗಳು. | ರೂ. 150–00 |
| ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ | ರೂ. 300–00 |

**7. ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: **18/10/2016** ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ./ಪ.ಪಂ./ಪ್ರ–1 | 18 | 40 |
| 2ಎ, 2ಬಿ, 3ಎ, 3ಬಿ. | 18 | 38 |
| ಸಾಮಾನ್ಯ ವರ್ಗ | 18 | 35 |

1977ರ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 6 ರಲ್ಲಿ ತಿಳಿಸಿರುವ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

**8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ ಮೀಸಲಾತಿ ಕೋರಬಯಸುವ

* ಪ.ಜಾ./ಪ.ಪಂ. ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ
* ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಹಾಗೂ
* 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಿತ ತಹಸೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದು ಪರಿಶೀಲನಾ ದಿನಾಂಕದಂದು ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಹಾಜರುಪಡಿಸುವುದು.

* ಜನನ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ. ಮೂಲ ಅಂಕಪಟ್ಟಿ ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರುವುದಕ್ಕೆ ಸಂಬಂಧಿಸಿದಂತೆ ಮೂಲ ದಾಖಲಾತಿಗಳನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸುವುದು.

**9. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು :**

ಮಾಜಿ ಸೈನಿಕರು ಅಥವಾ ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು, ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸಿರುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ಹಾಜರುಪಡಿಸುವುದು.

–ಮು.ತಿ.ನೋ.–

13/09

**10. ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ 1 ರಿಂದ 10 ನೇ ತರಗತಿಯವರೆಗೆ, ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೈಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ರ ಪ್ರಮಾಣ ಪತ್ರವಲ್ಲದೇ, ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಸೀಲ್ದಾರ್ ರವರಿಂದ ಪಡೆದು ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿಕೊಂಡು, ಪರಿಶೀಲನಾ ದಿನಾಂಕದಂದು ಕಡ್ಡಾಯವಾಗಿ ತಪ್ಪದೆ ಹಾಜರುಪಡಿಸುವುದು.

**11. ಕನ್ನಡ ಮಾಧ್ಯಮ ಅಭ್ಯರ್ಥಿ :**

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೈಮ್ ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

**12. ಅಂಗವಿಕಲ ಅಭ್ಯರ್ಥಿ :**

ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 52 ಎಸ್‌ಆರ್‌ಆರ್ 1999, ಬೆಂಗಳೂರು, ದಿನಾಂಕ: 29/11/2002 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿ.ಪಿ.ಎ.ಆರ್.54ಎಸ್.ಆರ್.ಆರ್. ದಿನಾಂಕ: 23/6/2012 ರನ್ವಯ, ಗ್ರಾಮಲೆಕ್ಕಿಗರ ಹುದ್ದೆಯಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

* **ಕುಷ್ಟರೋಗದಿಂದ ಗುಣಮುಖರಾದವರು. (Leprosy cured)**
* **ಶ್ರವಣ ದೋಷವುಳ್ಳವರು. (Hearing impaired)**
* **ಮಾನಸಿಕ ಅಸ್ವಸ್ಥತೆ. (Mentally ill)**
* **ಚಲನವಲನ ವೈಕಲ್ಯ. (Locomotor disability)**

**ಮೇಲಿನ ಸರ್ಕಾರಿ ಆದೇಶದಂತೆ ಈ ಮೇಲಿನ ಅಂಗವಿಕಲತೆಗಳನ್ನು ಹೊರತುಪಡಿಸಿ ಇತರೆ ಅಂಗವಿಕಲತೆವುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅಂಗವಿಕಲರ ಮೀಸಲಾತಿಯಡಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 9(1-ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್-ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006 ದಿನಾಂಕ: 1/8/2009 ರನ್ವಯ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ 115 ಸೆನೆನಿ 2005, ದಿನಾಂಕ: 19/11/2005 ರಲ್ಲಿ ನಿಗದಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ. ಈ ಪ್ರಮಾಣ ಪತ್ರವನ್ನು ಪರಿಶೀಲನಾ ದಿನಾಂಕದಂದು ಹಾಜರುಪಡಿಸುವುದು.

1/9/09

-ಮು.ತಿ.ನೋ.-